ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

*******************************************************************************

ಸಂಖ್ಯೆ : ಸಿ.ಎಸ್1/ಗಣಕಶಾಖೆ/ಎಸ್.ಎಸ್.ಎಲ್.ಸಿ.ಮೌ.ನೋ.ಅಪ್/01/2021-22 ದಿನಾಂಕ: 14-02-2022

**- ಸುತ್ತೋಲೆ -**

**ವಿಷಯ : 2022ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಯ ಮೌಲ್ಯಮಾಪನ ಕಾರ್ಯಕ್ಕಾಗಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ನೋಂದಣಿ/ಅಪ್‌ಡೇಟ್ ಮಾಡುವ ಬಗ್ಗೆ.**

*****

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಯಲಿರುವ 2022ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷಾ ಮೌಲ್ಯಮಾಪನ ಕಾರ್ಯಕ್ಕಾಗಿ ರಾಜ್ಯದ ಎಲ್ಲಾ ಸರ್ಕಾರಿ, ಮಾನ್ಯತೆ ಪಡೆದಿರುವ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು ತಮ್ಮ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರು ಮತ್ತು ವಿಷಯ ಶಿಕ್ಷಕರ ವಿವರಗಳನ್ನು ಶಾಲಾ ಲಾಗಿನ್‌ನಲ್ಲಿ ಆನ್‌ಲೈನ್ ಮೂಲಕ ನೋಂದಾಯಿಸಲು ದಿನಾಂಕ: 15-02-2022 ರಿಂದ ಅವಕಾಶ ಕಲ್ಪಿಸಲಾಗಿದೆ. ಶಾಲೆಯ ಮುಖ್ಯ ಶಿಕ್ಷಕರು ತಮ್ಮನ್ನು ಸೇರಿದಂತೆ ಶಾಲೆಯ ಎಲ್ಲಾ ಶಿಕ್ಷಕರನ್ನು ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸುವುದು ಕಡ್ಡಾಯವಾಗಿರುತ್ತದೆ ಮತ್ತು ಹಿಂದಿನ ವರ್ಷಗಳಲ್ಲಿ ಈಗಾಗಲೇ ನೋಂದಾಯಿಸಿರುವ ಶಿಕ್ಷಕರ ವಿವರಗಳಲ್ಲಿ ಯಾವುದೇ ಬದಲಾವಣೆಗಳಿಲ್ಲದಿದ್ದರೂ ಸಹ ಮತ್ತೊಮ್ಮೆ ಅಪ್‌ಡೇಟ್ ಮಾಡುವುದು ಕಡ್ಡಾಯವಾಗಿದೆ.

2021-22ನೇ ಶೈಕ್ಷಣಿಕ ವರ್ಷದಲ್ಲಿ ಹೊಸದಾಗಿ ನೇಮಕಗೊಂಡ, ಬಡ್ತಿ ಮತ್ತು ವರ್ಗಾವಣೆಯಿಂದ ಕರ್ತವ್ಯಕ್ಕೆ ಹಾಜರಾದ ಶಿಕ್ಷಕರ ವಿವರಗಳನ್ನು ಶಾಲಾ ಲಾಗಿನ್‌ನ Evaluator Details ಮೆನುವಿನಲ್ಲಿ ನೀಡಿರುವ Evaluators New Registration ಸಬ್ ಮೆನುವಿನಲ್ಲಿ ನೋಂದಾಯಿಸುವುದು ಹಾಗೂ ಈಗಾಗಲೇ ನೋಂದಾಯಿಸಿರುವ ಮೌಲ್ಯಮಾಪಕರ ವಿವರಗಳನ್ನು Update Evaluators Details ಸಬ್ ಮೆನುವಿನಲ್ಲಿ ಅಪ್‌ಡೇಟ್ ಮಾಡುವುದು. **ಮೌಲ್ಯಮಾಪಕರ ವಿವರಗಳನ್ನು Freeze ಮಾಡುವ ಮುನ್ನ ಎಲ್ಲಾ ವಿವರಗಳನ್ನು ಪರಿಶೀಲಿಸಿಕೊಂಡು ಮೌಲ್ಯಮಾಪಕರ ವಿವರಗಳಲ್ಲಿ ಏನಾದರೂ ತಿದ್ದುಪಡಿಗಳಿದ್ದಲ್ಲಿ ಅಪ್‌ಡೇಟ್ ಮಾಡಿ ನಂತರ Freeze ಮಾಡುವುದು. ಒಮ್ಮೆ Freeze ಮಾಡಿದ ನಂತರ ಯಾವುದೇ ತಿದ್ದುಪಡಿ/ಸೇರ್ಪಡೆಗೆ ಅವಕಾಶವಿರುವುದಿಲ್ಲ.**

2021-22ನೇ ಶೈಕ್ಷಣಿಕ ವರ್ಷದಲ್ಲಿ ತಮ್ಮ ಶಾಲೆಯಿಂದ ವರ್ಗಾವಣೆ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಶಿಕ್ಷಕರು ಕಾರ್ಯನಿರ್ವಹಿಸುತ್ತಿಲ್ಲವಾದರೆ ಅಂತಹ ಶಿಕ್ಷಕರ ವಿವರಗಳನ್ನು Update Evaluators Details ಸಬ್ ಮೆನುವಿನಲ್ಲಿ ಸೂಕ್ತ ಕಾರಣಗಳಿಂದ Delete ಮಾಡುವುದು.

ಶಿಕ್ಷಕರನ್ನು ಮೌಲ್ಯಮಾಪನಕ್ಕೆ ನೋಂದಾಯಿಸಿಕೊಳ್ಳುವಾಗ ಇಲ್ಲವೇ ಅಪ್‌ಡೇಟ್ ಮಾಡುವ ಮುನ್ನ ಈ ಕೆಳಗಿನ ವಿವರಗಳನ್ನು ಸಿದ್ಧಪಡಿಸಿಕೊಂಡು ನೋಂದಾಯಿಸುವುದು.

1. ಶಿಕ್ಷಕರ ಹೆಸರು & ಪದನಾಮ
2. ಜನ್ಮ ದಿನಾಂಕ
3. ಪ್ರೌಢ ಶಾಲಾ ಸೇವೆಗೆ ಸೇರಿದ ದಿನಾಂಕ
4. ವಿದ್ಯಾರ್ಹತೆ, ಬೋಧನಾ ವಿಷಯ ಮತ್ತು ಮಾಧ್ಯಮ
5. ಪ್ರಥಮ ಕೆ.ಜಿ.ಐ.ಡಿ ಸಂಖ್ಯೆ (ಸರ್ಕಾರಿ ಶಾಲಾ ಶಿಕ್ಷಕರಿಗಾಗಿ). ಉದ್ಯೋಗಿ ಸಂಖ್ಯೆ/ ವಿಮೆ ಪಾಲಿಸಿ ನಂಬರ್ (ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಶಾಲಾ ಶಿಕ್ಷಕರಿಗಾಗಿ)
6. ಬ್ಯಾಂಕ್ ಖಾತೆಯ ವಿವರಗಳು (ಬ್ಯಾಂಕ್ ಹೆಸರು, ಖಾತೆ ಸಂಖ್ಯೆ ಮತ್ತು ಐ.ಎಫ್.ಎಸ್.ಸಿ ಕೋಡ್)
7. ಶಿಕ್ಷಕರ ಫೋಟೋ ಮತ್ತು ಸಹಿ (ನಿಗದಿತ ಅಳತೆಯಲ್ಲಿ ಸ್ಕ್ಯಾನ್ ಮಾಡಿ ಸೇವ್ ಮಾಡಿ ಇಟ್ಟುಕೊಳ್ಳುವುದು.)

**Photo- (60-80kb) Signature (20-50kb) in jpeg format**

ಮುಖ್ಯ ಶಿಕ್ಷಕರು ಶಿಕ್ಷಕರನ್ನು ನೋಂದಾಯಿಸುವಾಗ ಮೌಲ್ಯಮಾಪನದ ವಿಷಯ ಮತ್ತು ಅವುಗಳ ವಿಷಯ ಸಂಕೇತಗಳನ್ನು ಸರಿಯಾಗಿ ಗಮನಿಸಿಕೊಂಡು ನೋಂದಾಯಿಸುವುದು, ಅಂದರೆ ತಮ್ಮ ಶಾಲೆಯಲ್ಲಿ ಶಿಕ್ಷಕರು ಬೋಧಿಸುತ್ತಿರುವ ಪ್ರಥಮ ಭಾಷೆ, ದ್ವಿತೀಯ ಭಾಷೆ, ತೃತೀಯ ಭಾಷೆಗಳನ್ನು ಮತ್ತು ಕೋರ್ ವಿಷಯಗಳಾದ ಗಣಿತ, ವಿಜ್ಞಾನ ಮತ್ತು ಸಮಾಜ ವಿಜ್ಞಾನ ಬೋಧನಾ ಮಾಧ್ಯಮವನ್ನು ದೃಢೀಕರಿಸಿಕೊಂಡು ನೋಂದಾಯಿಸುವುದು. ಕಳೆದ ವರ್ಷ ಪ್ರಥಮ ಭಾಷೆ ಕನ್ನಡ (01K) ಶಿಕ್ಷಕರನ್ನು ತೃತೀಯ ಭಾಷೆ (62K) ಕನ್ನಡ ವಿಷಯಕ್ಕೆ, ದ್ವಿತೀಯ ಭಾಷೆ ಇಂಗ್ಲೀಷ್ (31E) ಶಿಕ್ಷಕರನ್ನು ಪ್ರಥಮ ಭಾಷೆ ಇಂಗ್ಲೀಷ್ (14E) ವಿಷಯಕ್ಕೆ ತಪ್ಪಾಗಿ ನೋಂದಾಯಿಸಿರುವುದು ಮಂಡಳಿಯ ಗಮನಕ್ಕೆ ಬಂದಿರುತ್ತದೆ. ಹಾಗಾಗಿ ಮೌಲ್ಯಮಾಪನಕ್ಕೆ ವಿಷಯಗಳನ್ನು ನೋಂದಾಯಿಸುವಾಗ ಬೋಧನಾ ವಿಷಯ ಮತ್ತು ಮಾಧ್ಯಮಗಳನ್ನು ಪರಿಶೀಲಿಸಿಕೊಂಡು ನೋಂದಾಯಿಸುವುದು.

ತಮ್ಮ ಶಾಲೆಯಲ್ಲಿ NSQF, JTS ಮತ್ತು Alternative ವಿಷಯಗಳನ್ನು ಬೋಧಿಸುತ್ತಿರುವ ಶಿಕ್ಷಕರಿದ್ದಲ್ಲಿ, ಅವರನ್ನೂ ಸಹ 2022ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಯ ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸುವುದು ಕಡ್ಡಾಯವಾಗಿರುತ್ತದೆ.

ಆದರ್ಶ ವಿದ್ಯಾಲಯ ಶಾಲೆಗಳ ಶಿಕ್ಷಕರನ್ನು ನೋಂದಾಯಿಸುವಾಗ ಅಥವಾ Update ಮಾಡುವಾಗ ಭಾಷಾ ವಿಷಯವನ್ನು ಆಯ್ಕೆ ಮಾಡಿಕೊಳ್ಳುವ ಸಂದರ್ಭದಲ್ಲಿ 15-ಪ್ರಥಮ ಭಾಷೆ ಇಂಗ್ಲೀಷ್(NCERT) ಹಾಗೂ 60-ತೃತೀಯ ಭಾಷೆ ಹಿಂದಿ(NCERT) ಭಾಷಾ ಸಂಕೇತವನ್ನು ಆಯ್ಕೆ ಮಾಡಿಕೊಳ್ಳುವುದು.

ಶಿಕ್ಷಕರ ಮೌಲ್ಯಮಾಪನ ಕಾರ್ಯಕ್ಕಾಗಿ ನೋಂದಾಯಿಸಿದ ನಂತರ ಜನರೇಟ್ ಆಗುವ Evaluator's Individual Registration Reportನ್ನು ಪ್ರತಿಯೊಬ್ಬ ಶಿಕ್ಷಕರಿಗೂ ನೀಡಿ ವಿವರಗಳನ್ನು ಪರಿಶೀಲಿಸಿಕೊಂಡು, ವಿವರಗಳು ಸಮರ್ಪಕವಾಗಿರುವುದನ್ನು ಶಿಕ್ಷಕರಿಂದ ದೃಢೀಕರಿಸಿಕೊಂಡ ನಂತರ Freeze ಮಾಡುವುದು.

2022ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಯ ಮೌಲ್ಯಮಾಪನ ಕಾರ್ಯಕ್ಕೆ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲಾ ಶಿಕ್ಷಕರು ನೋಂದಾಯಿಸುವುದು ಕಡ್ಡಾಯವಾಗಿರುತ್ತದೆ. ಮೌಲ್ಯಮಾಪಕರ ವಿವರಗಳನ್ನು Update ಮಾಡಿ Freeze ಮಾಡಲು **22-02-2022** ಅಂತಿಮ ದಿನಾಂಕವಾಗಿರುತ್ತದೆ. ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸದ ಶಾಲೆಗಳ ಅಂತಿಮ ಪ್ರವೇಶ ಪತ್ರಗಳನ್ನು ತಡೆಹಿಡಿಯಲಾಗುವುದು ಮತ್ತು ಶಿಸ್ತುಕ್ರಮ ಜರುಗಿಸಲಾಗುವುದು.

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು, (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರು ತಮ್ಮ ಜಿಲ್ಲೆಯ ಎಲ್ಲಾ ಶಾಲೆಗಳು ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸಲು ಕ್ರಮವಹಿಸುವುದು.
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ